# ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

E-mail:Commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ:-ಪಪೂಶಿಇ/ಶೈಶಾ/ NTSC/2018-2019 ದಿನಾಂಕ:20/08/2018

## ಜ್ಞಾಪನ

**ವಿಷಯ:-** ಎನ್.ಎಸ್.ಪಿ2.0 ಪೋರ್ಟಲ್ ನಲ್ಲಿ ಎನ್.ಎಂ.ಎಂ.ಎಸ್ ವಿದ್ಯಾರ್ಥಿಗಳ ವಿವರಗಳನ್ನು Upload ಮಾಡುವ ಕುರಿತು

**ಉಲ್ಲೇಖ:-** ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಡಿ.ಎಸ್.ಇ.ಆರ್.ಟಿ ಇವರ ಪತ್ರ ಸಂಖ್ಯೆ :D.O No:DSERT/NTSE/20/ಏಕ ಕಡತ/2018-19 ದಿನಾಂಕ:- 01.08.2018

---------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರದ MHRD ಇಲಾಖೆ ಅಡಿಯಲ್ಲಿ NMMS ಸ್ಪರ್ಧಾತ್ಮಕ ಪರೀಕ್ಷೆಯನ್ನು 8 ನೇ ತರಗತಿಯ ವಿದ್ಯಾರ್ಥಿಗಳಿಗೆ ನಡೆಸಲಾಗುತ್ತದೆ. ಆಯ್ಕೆಯಾದ ವಿದ್ಯಾರ್ಥಿಗಳಿಗೆ 9 ರಿಂದ 12 ನೇ ತರಗತಿವರೆಗೂ ವಾರ್ಷಿಕ 12000/- ರಂತೆ ವಿದ್ಯಾರ್ಥಿ ವೇತನವನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುತ್ತದೆ.

ಆದರೆ, ಪದವಿ ಪೂರ್ವ ಕಾಲೇಜಿನಲ್ಲಿ ಅಭ್ಯಾಸ ಮಾಡುತ್ತಿರುವ, ಆಯ್ಕೆಯಾದ ವಿದ್ಯಾರ್ಥಿಗಳು ತಮ್ಮ ಮಾಹಿತಿಯನ್ನು ಎನ್.ಎಸ್.ಪಿ2.0 (National scholarship portal Website (www.scholarships.gov.in) ನಲ್ಲಿ ವಿವರಗಳನ್ನು upload ಮಾಡದ ಕಾರಣ ವಿದ್ಯಾರ್ಥಿ ವೇತನದಿಂದ ವಂಚಿತರಾಗುವ ಪ್ರಕರಣಗಳು ಹೆಚ್ಚಾಗಿರುವುದರಿಂದ, ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರು, ತಮ್ಮ ಕಾಲೇಜಿನಲ್ಲಿ ಓದುತ್ತಿರುವ, NMMS ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ಎನ್.ಎಸ್.ಪಿ2.0 (National scholarship portal Website (www.scholarships.gov.in) ನಲ್ಲಿ upload ಮಾಡಿ ಅದನ್ನು verify ಮಾಡಿ ಜಿಲ್ಲಾ ಹಂತಕ್ಕೆ (DIET) ಗೆ ಕಳುಹಿಸುವ ಜವಾಬ್ದಾರಿ ಹೊಂದಿರುತ್ತಾರೆ. ಆದ ಕಾರಣ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಪ.ಪೂ.ಕಾಲೇಜುಗಳ ಪ್ರಾಂಶುಪಾಲರುಗಳು ವಿಳಂಬಕ್ಕೆ ಅಸ್ಪದ ನೀಡದೆ ಎಲ್ಲಾ ವಿದ್ಯಾರ್ಥಿಗಳ ಮಾಹಿತಿಯನ್ನು ಮೇಲ್ಕಂಡ ವೆಬ್‌ಸೈಟ್‌ನಲ್ಲಿ upload ಮಾಡಲು ಸೂಚಿಸಿದೆ.

20/8/18

ಜಂಟಿ ನಿರ್ದೇಶಕರು(ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಗೆ,

1. ಎಲ್ಲಾ ರಾಜ್ಯದ ಉಪ ನಿರ್ದೇಶಕರು, ಪ.ಪೂ.ಶಿ.ಇಲಾಖೆ, ಇವರ ಮುಖಾಂತರ ಕಾಲೇಜಿನ ಪ್ರಾಂಶುಪಾಲರಿಗೆ.
2. ಇ- ಆಡಳಿತ- ಅಂತರ್‌ಜಾಲದಲ್ಲಿ ಅಳವಡಿಸಲು ಕೋರಿದೆ

**ಪ್ರತಿಯನ್ನು-ಮಾಹಿತಿಗಾಗಿ,**

1. ಮಾನ್ಯ ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು.
2. ಕಛೇರಿ ಪ್ರತಿ